**All India Radio: Bangalore**
**National Bulletin In Kannada**
**21.03.2026 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**21.03.2026 1.10 p.m.**

**<><><><>**

ಮುಖ್ಯಾಂಶಗಳು

1. ಹೊರ್ಮುಜ್ ಜಲಸಂಧಿಯಲ್ಲಿ ಸುರಕ್ಷಿತ ಸಂಚಾರ ಖಚಿತಪಡಿಸುವ ಪ್ರಯತ್ನಗಳಿಗೆ ಕೈ ಜೋಡಿಸುವುದಾಗಿ ದಕ್ಷಿಣ ಕೊರಿಯಾ ಘೋಷಣೆ
2. 'ನೂತನ ಆದಾಯ ತೆರಿಗೆ ನಿಯಮಗಳು ೨೦೨೬' ಜಾರಿಗೆ ಅಧಿಸೂಚನೆ ; ತೆರಿಗೆ ಪ್ರಕ್ರಿಯೆ ಸರಳೀಕರಣಕ್ಕೆ ಕೇಂದ್ರ ಸರ್ಕಾರ ಕ್ರಮ
3. ದೇಶಾದ್ಯಂತ ಇಂದು ಈದ್ ಉಲ್ ಫಿತರ್ ಸಂಭ್ರಮ : ರಾಷ್ಟ್ರಪತಿ, ಉಪರಾಷ್ಟ್ರಪತಿ, ಪ್ರಧಾನಿ ಸೇರಿ ಗಣ್ಯರಿಂದ ಶುಭಾಶಯ
4. ಆರ್ಲಿಯನ್ಸ್ ಮಾಸ್ಟರ್ಸ್ ಬ್ಯಾಡ್ಮಿಂಟನ್ ಟೂರ್ನಿ ; ಸೆಮಿಫೈನಲ್‌ನಲ್ಲಿಂದು ಭಾರತದ ತನ್ವಿ ಮತ್ತು ಇಶಾರಾಣಿ ಕಣದಲ್ಲಿ
5. ಇಂಡಿಯನ್ ಓಪನ್ ಸ್ಕ್ವ್ಯಾಷ್ ಟೂರ್ನಿ : ಭಾರತದ ನಾಲ್ವರು ಕ್ರೀಡಾಪಟುಗಳು ಸೆಮಿಫೈನಲ್ ಪ್ರವೇಶ

<><><><>

ಜಾಗತಿಕ ತೈಲ ಮತ್ತು ಅನಿಲ ಪೂರೈಕೆಯ ಶೇಕಡ ೨೦ರಷ್ಟು ಪಾಲನ್ನು ಹೊಂದಿರುವ ಆಯಕಟ್ಟಿನ ಹೊರ್ಮುಜ್ ಜಲಸಂಧಿಯಲ್ಲಿ ಹಡಗುಗಳ ಸುರಕ್ಷಿತ ಸಂಚಾರವನ್ನು ಖಚಿತಪಡಿಸಲು ಸಿದ್ಧವಿರುವುದಾಗಿ ದಕ್ಷಿಣ ಕೊರಿಯಾ ಘೋಷಿಸಿದೆ. ಈ ಕುರಿತು ಅಧಿಕೃತ ಹೇಳಿಕೆ ಬಿಡುಗಡೆ ಮಾಡಿರುವ ದಕ್ಷಿಣ ಕೊರಿಯ ವಿದೇಶಾಂಗ ಸಚಿವಾಲಯ, ಗಲ್ಫ್ ಪ್ರದೇಶದಲ್ಲಿ ಇರಾನ್ ನಡೆಸುತ್ತಿರುವ ದಾಳಿಗಳನ್ನು ಖಂಡಿಸುವ ಮತ್ತು ಜಲಸಂಧಿಯ ಸಂಚಾರಕ್ಕೆ ಅಡ್ಡಿಪಡಿಸುತ್ತಿರುವುದನ್ನು ವಿರೋಧಿಸುವ ೭ ರಾಷ್ಟ್ರಗಳ ಜಂಟಿ ಹೇಳಿಕೆಗೆ ದಕ್ಷಿಣ ಕೊರಿಯಾ ಸಹ ಧ್ವನಿಗೂಡಿಸುವುದಾಗಿ ತಿಳಿಸಿದೆ. ಬ್ರಿಟನ್, ಫ್ರಾನ್ಸ್, ಜರ್ಮನಿ, ಇಟಲಿ, ಜಪಾನ್, ನೆದರ್‌ಲ್ಯಾಂಡ್ಸ್ ಮತ್ತು ಕೆನಡಾ ಸೇರಿದಂತೆ ಒಟ್ಟು ೭ ರಾಷ್ಟ್ರಗಳು ಈಗಾಗಲೇ ಜಂಟಿ ಹೇಳಿಕೆ ಬಿಡುಗಡೆ ಮಾಡಿದ್ದು,

ಇರಾನ್ ತನ್ನ ದಾಳಿಗಳನ್ನು ತಕ್ಷಣವೇ ನಿಲ್ಲಿಸಿ, ಜಾಗತಿಕ ಜಲಮಾರ್ಗಗಳನ್ನು ನಿರ್ಬಂಧಿಸುವ ಪ್ರಯತ್ನಗಳಿಂದ ಹಿಂದೆಸರಿಯಬೇಕು ; ಮತ್ತು ನೌಕಾಯಾನ ಸ್ವಾತಂತ್ರ್ಯದ ತತ್ವವನ್ನು ಪಾಲಿಸಬೇಕು ಎಂದು ಇರಾನ್‌ಗೆ ಈ ರಾಷ್ಟ್ರಗಳು ಆಗ್ರಹಿಸಿವೆ.

<><><>

ಪಶ್ಚಿಮ ಏಷ್ಯಾದಲ್ಲಿ ಉಂಟಾಗಿರುವ ಪರಿಸ್ಥಿತಿ ಎದುರಿಸಲು ಕೇಂದ್ರ ಸರ್ಕಾರ ಅತ್ಯಂತ ಸಂಘಟಿತ ಮತ್ತು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡಿದೆ. ವಿವಿಧ ಸಚಿವಾಲಯಗಳ ಜಂಟಿ ಸಹಯೋಗದೊಂದಿಗೆ ದೇಶಾದ್ಯಂತ ಇಂಧನ ಪೂರೈಕೆಯಲ್ಲಿ ಯಾವುದೇ ವ್ಯತ್ಯಯವಾಗದಂತೆ ಸರ್ಕಾರ ಕಟ್ಟುನಿಟ್ಟಿನ ನಿಗಾವಹಿಸಿದೆ. ಪ್ರಮುಖವಾಗಿ ಕಾಳಸಂತೆ ಮಾರಾಟ, ಸಾರ್ವಜನಿಕರಿಂದ ಆತಂಕದ ಖರೀದಿ ತಡೆಯಲು ಸರ್ಕಾರ ಕ್ರಮ ಕೈಗೊಂಡಿದೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ತಿಳಿಸಿದೆ. ಎಲ್ಲಾ ಸಂಸ್ಕರಣಾಗಾರಗಳು ಸಾಕಷ್ಟು ಕಚ್ಚಾ ತೈಲ ದಾಸ್ತಾನುಗಳೊಂದಿಗೆ ಹೆಚ್ಚಿನ ಸಾಮರ್ಥ್ಯದಲ್ಲಿ ಕಾರ್ಯ ನಿರ್ವಹಿಸುತ್ತಿವೆ. ದೇಶೀಯ ಎಲ್‌ಪಿಜಿ ಉತ್ಪಾದನೆ ಸ್ಥಿರವಾಗಿದೆ ಮತ್ತು ಸಾಕಷ್ಟು ಸಂಗ್ರಹ ಲಭ್ಯವಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ.

<><><>

ಭಾರತದ ಪಶ್ಚಿಮ ಭೂಭಾಗವನ್ನು ಬಳಸಿಕೊಂಡು ಇರಾನ್ ಮೇಲೆ ಬಾಂಬ್ ದಾಳಿ ನಡೆಸಲು ಅಮೆರಿಕ ಭಾರತದ ಸೇನಾ ಬೆಂಬಲ ಕೋರಿದೆ ಎಂಬುದಾಗಿ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಸುದ್ದಿ ಸತ್ಯಕ್ಕೆ ದೂರವಾಗಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಸತ್ಯ ಶೋಧನಾ ಘಟಕ ಸ್ಪಷ್ಟಪಡಿಸಿದೆ. ಈ ಕುರಿತು ಹರಿದಾಡುತ್ತಿರುವ ಸುದ್ದಿಗಳು ಸಂಪೂರ್ಣವಾಗಿ ಆಧಾರರಹಿತವಾಗಿವೆ ಎಂದು ತಿಳಿಸಿದೆ. ಇಂತಹ ಸುಳ್ಳು ಮಾಹಿತಿಗಳ ಬಗ್ಗೆ ಸಾರ್ವಜನಿಕರು ಜಾಗೃತರಾಗಿರಲು ಹಾಗೂ ಇವುಗಳನ್ನು ನಂಬದಿರುವಂತೆ ವಿದೇಶಾಂಗ ಸಚಿವಾಲಯ ಮನವಿ ಮಾಡಿದೆ.

<><><>

ನೂತನ ಆದಾಯ ತೆರಿಗೆ ನಿಯಮಗಳು-೨೦೨೬ಅನ್ನು ಕೇಂದ್ರ ಸರ್ಕಾರ ಅಧಿಕೃತವಾಗಿ ಅಧಿಸೂಚಿಸಿದ್ದು, ಇವು ಮುಂದಿನ ತಿಂಗಳ ೧ನೇ ತಾರೀಕಿನಿಂದ ಜಾರಿಗೆ ಬರಲಿವೆ. ಆದಾಯ ತೆರಿಗೆ ಕಾಯ್ದೆ-೨೦೨೫ರ ನಿಬಂಧನೆಗಳನ್ನು ಜಾರಿಗೆ ತರುವ ನಿಟ್ಟಿನಲ್ಲಿ ಈ ಹೊಸ ನಿಯಮಗಳನ್ನು ರೂಪಿಸಲಾಗಿದ್ದು, ಹಳೆಯ ಕಾರ್ಯ ವಿಧಾನಗಳ ಬದಲಿಗೆ ಆಧುನಿಕ ಮತ್ತು ಸುಧಾರಿತ

ಪದ್ಧತಿಗಳನ್ನು ಅಳವಡಿಸಲಾಗಿದೆ. ತೆರಿಗೆ ಪಾವತಿ ಪ್ರಕ್ರಿಯೆಯನ್ನು ಸುಗಮಗೊಳಿಸಲು ಹಾಗೂನಿಯಮಗಳ ಸಂಖ್ಯೆಯನ್ನು ಕಡಿಮೆಮಾಡುವ ಮೂಲಕ ಆಡಳಿತಾತ್ಮಕ ಸಂಕೀರ್ಣತೆಯನ್ನು ತಗ್ಗಿಸುವುದು ಇದರ ಮುಖ್ಯ ಉದ್ದೇಶವಾಗಿದೆ ಎಂದು ಹಣಕಾಸು ಸಚಿವಾಲಯ ತಿಳಿಸಿದೆ. ಈ ನೂತನ ನಿಯಮಗಳ ಅಡಿಯಲ್ಲಿ ನೇರ ತೆರಿಗೆ ವ್ಯವಸ್ಥೆಯ ಅನುಷ್ಠಾನ ಮತ್ತು ಅನುಸರಣಾ ವಿಧಾನಗಳಲ್ಲಿ ಪ್ರಮುಖ ಬದಲಾವಣೆ ಮಾಡಲಾಗಿದೆ. ಪಾರದರ್ಶಕತೆ ಹೆಚ್ಚಿಸಲು ಕಟ್ಟುನಿಟ್ಟಾದ ಮಾಹಿತಿ ಬಹಿರಂಗಪಡಿಸುವಿಕೆ ಕ್ರಮಗಳನ್ನು ಕೈಗೊಳ್ಳಲಾಗಿದೆ. ದೇಶದ ತೆರಿಗೆ ವ್ಯವಸ್ಥೆಯನ್ನು ಹೆಚ್ಚು ದಕ್ಷ ಮತ್ತು ಜನಸ್ನೇಹಿಯಾಗಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆ ಇದಾಗಿದೆ.

<><><><>

ಪವಿತ್ರ ರಂಜಾನ್ ಮಾಸದ ಉಪವಾಸದ ಸಮಾಪ್ತಿಯನ್ನು ಸೂಚಿಸುವ ಈದ್ ಉಲ್ ಫಿತರ್ ಹಬ್ಬವನ್ನು ಇಂದು ದೇಶಾದ್ಯಂತ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಮುಸ್ಲಿಂ ಬಾಂಧವರು ಸಾಂಪ್ರದಾಯಿಕ ಉಡುಗೆ ತೊಟ್ಟು, ಈದ್ಗಾ ಮೈದಾನ ಮತ್ತು ಮಸೀದಿಗಳಲ್ಲಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿ, ಪರಸ್ಪರ ಶುಭಾಶಯ ಹಾಗೂ ಸಿಹಿ ಹಂಚುವ ಮೂಲಕ ಸಂಭ್ರಮಾಚರಣೆಯಲ್ಲಿ ತೊಡಗಿದ್ದಾರೆ. ದೆಹಲಿಯ ಜಮಾ ಮಸೀದಿ ಸೇರಿದಂತೆ ಪ್ರಮುಖ ಪ್ರಾರ್ಥನಾ ಸ್ಥಳಗಳಲ್ಲಿ ವಿಶೇಷ ಈದ್ ಸಂಭ್ರಮಾಚರಣೆಗಳು ನಡೆಯುತ್ತಿದ್ದು, ಭದ್ರತೆಗಾಗಿ ಬಿಗಿ ಪೊಲೀಸ್ ಬಂದೋಬಸ್ತ್ ಕೈಗೊಳ್ಳಲಾಗಿದೆ. ಈ ಸಂದರ್ಭದಲ್ಲಿ ದೇಶದ ಸಮಸ್ತ ಜನತೆಗೆ ವಿಶೇಷವಾಗಿ ಮುಸ್ಲಿಂ ಬಾಂಧವರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ ಶುಭಾಶಯ ಕೋರಿದ್ದಾರೆ. ಈ ಹಬ್ಬ ಆತ್ಮ ಸಂಯಮ, ದಾನ ಮತ್ತು ಮಾನವೀಯತೆ ಸಂದೇಶವನ್ನು ಸಾರುತ್ತದೆ ಎಂದು ರಾಷ್ಟ್ರಪತಿ ತಿಳಿಸಿದ್ದಾರೆ. ಈದ್ ನಮ್ಮಲ್ಲಿ ಪ್ರೀತಿ, ಭ್ರಾತೃತ್ವ ಮತ್ತು ಸಾಮರಸ್ಯವನ್ನು ವೃದ್ಧಿಸಲಿ ಎಂದು ಆಶಿಸಿರುವ ಅವರು, ಸಮಾಜದ ಹಿಂದುಳಿದ ವರ್ಗಗಳ ನೆರವಿಗೆ ಧಾವಿಸುವ ಮೂಲಕ ರಾಷ್ಟ್ರದ ಪ್ರಗತಿಗೆ ಶ್ರಮಿಸಲು ಕರೆ ನೀಡಿದ್ದಾರೆ. ತಮ್ಮ ಸಂದೇಶದಲ್ಲಿ ಉಪರಾಷ್ಟ್ರಪತಿ, ಈ ದಿನ ಭರವಸೆ, ಸಾಮರಸ್ಯ, ಸಹಾನುಭೂತಿಯನ್ನು ಪ್ರೇರೇಪಿಸಲಿ ಮತ್ತು ಎಲ್ಲರಿಗೂ ಸಂತೋಷ ಹಾಗೂ ಯಶಸ್ಸನ್ನು ತರಲಿ ಎಂದು ಹಾರೈಸಿದ್ದಾರೆ. ಈ ಹಬ್ಬ ಎಲ್ಲೆಡೆ ಸಹೋದರತ್ವ ಮತ್ತು ದಯಾ ಮನೋಭಾವವನ್ನು

ಬಲಪಡಿಸಲಿ ಎಂದು ಆಶಿಸಿರುವ ಪ್ರಧಾನಿ ನರೇಂದ್ರ ಮೋದಿ, ಎಲ್ಲರಿಗೂ ಸಂತೋಷ, ಉತ್ತಮ ಆರೋಗ್ಯ ಮತ್ತು ಸಮೃದ್ಧಿ ದೊರೆಯಲಿ ಎಂದು ಹಾರೈಸಿದ್ದಾರೆ.

<><><>

ಎರಡು ದಿನಗಳ ಮಹಾರಾಷ್ಟ್ರ ಪ್ರವಾಸ ಕೈಗೊಂಡಿರುವ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಇಂದು ನಾಗ್ಪುರದ ಮಹರ್ಷಿ ವ್ಯಾಸ್ ಸಭಾಂಗಣದಲ್ಲಿ ಭಾರತೀಯ ಯುವ ಸಂಸತ್ತಿನ ೨೯ನೇ ರಾಷ್ಟ್ರೀಯ ಅಧಿವೇಶನದ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿದರು. ನಂತರ ಅವರು, ನಾಗ್ಪುರದಲ್ಲಿರುವ ಡಾ. ಹೆಡ್ಗೆವಾರ್ ಸ್ಮೃತಿಭವನದಲ್ಲಿ ರಾಷ್ಟ್ರೀಯ ಸ್ವಯಂಸೇವಕ ಸಂಘದ ಸಂಸ್ಥಾಪಕ ದಿವಂಗತ ಡಾ. ಹೆಡ್ಗೆವಾರ್ ಅವರಿಗೆ ಪುಷ್ಪನಮನ ಸಲ್ಲಿಸಿದರು. ತಮ್ಮ ಭೇಟಿಯ ಮೊದಲ ದಿನವಾದ ಇಂದು ಬೆಳಗ್ಗೆ ನಾಗ್ಪುರಕ್ಕೆ ಆಗಮಿಸಿದ ಅವರನ್ನು ಮಹಾರಾಷ್ಟ್ರ ರಾಜ್ಯಪಾಲ ಜಿಷ್ಣುದೇವ್ ವರ್ಮಾ ಮತ್ತಿತರ ಗಣ್ಯರು ಬರಮಾಡಿಕೊಂಡರು.

<><><>

ಅರಣ್ಯಗಳ ಮಹತ್ವದ ಕುರಿತು ಜನರಲ್ಲಿ ಅರಿವು ಮೂಡಿಸಲು ಇಂದು ಅಂತಾರಾಷ್ಟ್ರೀಯ ಅರಣ್ಯ ದಿನವನ್ನು ಆಚರಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಸಾಮಾಜಿಕ ಮಾಧ್ಯಮದಲ್ಲಿ ಸಂದೇಶ ಹಂಚಿಕೊಂಡಿರುವ ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವ ಭೂಪೇಂದ್ರ ಯಾದವ್, ಅರಣ್ಯಗಳ ಸಂರಕ್ಷಣೆಗಾಗಿ ಪ್ರತಿಜ್ಞೆ ಮಾಡುವಂತೆ ನಾಗರಿಕರಿಗೆ ಕರೆ ನೀಡಿದ್ದಾರೆ. ಅರಣ್ಯ ಎಂಬುದು ಕೇವಲ ಬಳಸಿಕೊಳ್ಳುವ ಸಂಪನ್ಮೂಲವಾಗಿರದೆ ಸಂರಕ್ಷಿಸಬೇಕಾದ ಒಂದು ಜೀವನಾಡಿಯಾಗಿದೆ ಎಂದು ಅವರು ತಿಳಿಸಿದ್ದಾರೆ. ೨೦೧೨ರಲ್ಲಿ ವಿಶ್ವಸಂಸ್ಥೆಯ ಸಾಮಾನ್ಯ ಸಭೆ, ಮಾರ್ಚ್ ೨೧ಅನ್ನು ಅಂತಾರಾಷ್ಟ್ರೀಯ ಅರಣ್ಯ ದಿನ ಎಂದು ಘೋಷಿಸಿದ್ದು, ಎಲ್ಲಾ ರೀತಿಯ ಅರಣ್ಯಗಳ ಪ್ರಾಮುಖ್ಯತೆ ಬಗ್ಗೆ ಜಾಗೃತಿ ಮೂಡಿಸಲು ಈ ದಿನ ಮೀಸಲಿಡಲಾಗಿದೆ. ಇಂದು ಗಿಡ ನೆಡುವ ಅಭಿಯಾನ ಸೇರಿದಂತೆ ಅರಣ್ಯ ಸಂರಕ್ಷಣೆಗೆ ಪೂರಕವಾದ ವಿವಿಧ ಚಟುವಟಿಕೆಗಳನ್ನು ಹಮ್ಮಿಕೊಳ್ಳಲು ಪ್ರೋತ್ಸಾಹಿಸಲಾಗುತ್ತದೆ. ಆರ್ಥಿಕ ಪ್ರಗತಿಯಲ್ಲಿ ಅರಣ್ಯಗಳು ವಹಿಸುವ ಪ್ರಮುಖ ಪಾತ್ರದ ಕುರಿತು ಬೆಳಕುಚೆಲ್ಲಲು ಅರಣ್ಯಗಳು ಮತ್ತು ಆರ್ಥಿಕತೆ ಎಂಬುದು ಈ ವರ್ಷದ ಧ್ಯೇಯವಾಕ್ಯವಾಗಿದೆ.

<><><>

ದೇಶದ ಪರಿಸರ ಮತ್ತು ಸಾಮಾಜಿಕ-ಆರ್ಥಿಕ ವ್ಯವಸ್ಥೆಯ ಮೇಲೆ ಅತಿಕ್ರಮಣಕಾರಿ ವಿದೇಶಿ ಪ್ರಭೇದಗಳು ಉಂಟುಮಾಡುತ್ತಿರುವ ಅಪಾಯಗಳನ್ನು ಎದುರಿಸಲು ರಾಷ್ಟ್ರೀಯ ಜೀವವೈವಿಧ್ಯ ಪ್ರಾಧಿಕಾರವು ಉನ್ನತ ಮಟ್ಟದ ತಜ್ಞರ ಸಮಿತಿಯನ್ನು ರಚಿಸಿದೆ.

<><><><>

ಅಸ್ಸಾಂನ ಮುಂಬರುವ ವಿಧಾನಸಭಾ ಚುನಾವಣೆಗಾಗಿ ಕಾಂಗ್ರೆಸ್ ಪಕ್ಷ ೭ ಅಭ್ಯರ್ಥಿಗಳ ಮತ್ತೊಂದು ಪಟ್ಟಿಯನ್ನು ಬಿಡುಗಡೆ ಮಾಡಿದೆ. ಜಲುಕ್ಬಾರಿ ಕ್ಷೇತ್ರದಿಂದ ಬಿಧಿಶಾ ನಿಯೋಗ, ಬಿಸ್ವನಾಥ್ ಕ್ಷೇತ್ರದಿಂದ ಜಯಂತ ಬೋರಾ, ಹೈಲಕಾಂಡಿ ಕ್ಷೇತ್ರದಿಂದ ರಾಹುಲ್ ರಾಯ್ ಅವರನ್ನು ಕಣಕ್ಕಿಳಿಸಲಾಗಿದೆ. ಕಾಂಗ್ರೆಸ್ ಕೇಂದ್ರ ಚುನಾವಣಾ ಸಮಿತಿ, ಈ ಅಭ್ಯರ್ಥಿಗಳ ಹೆಸರನ್ನು ಅಂತಿಮಗೊಳಿಸಿದ್ದು, ರಾಜ್ಯದಲ್ಲಿ ತನ್ನ ಮಿತ್ರ ಪಕ್ಷವಾದ ರೈಜೋರ್ ದಳಕ್ಕೆ ೧೧ ಸ್ಥಾನಗಳನ್ನು ಬಿಟ್ಟುಕೊಟ್ಟಿದೆ. ಒಟ್ಟು ೧೨೬ ಸದಸ್ಯ ಬಲದ ಅಸ್ಸಾಂ ವಿಧಾನಸಭೆಗೆ ಏಪ್ರಿಲ್ ೯ ರಂದು ಮತದಾನ ನಡೆಯಲಿದ್ದು, ಮೇ ೪ ರಂದು ಮತ ಎಣಿಕೆ ನಡೆಯಲಿದೆ.

<><><><>

ಅಸ್ಸಾಂ, ಕೇರಳ ಮತ್ತು ಪುದುಚೇರಿಯಲ್ಲಿ ಮುಂಬರುವ ವಿಧಾನಸಭಾ ಚುನಾವಣೆಗಳಿಗಾಗಿ ಚುನಾವಣಾ ಆಯೋಗವು, ವಿದ್ಯುನ್ಮಾನ ಮತಯಂತ್ರ ಇವಿಎಂ ಮತ್ತು ವಿವಿಪ್ಯಾಟ್‌ನ ಮೊದಲ ರ್‍ಯಾಂಡಮೈಸೇಷನ್ ಪ್ರಕ್ರಿಯೆಯನ್ನು ಪೂರ್ಣಗೊಳಿಸಿದೆ. ಈ ರಾಜ್ಯಗಳ ಜೊತೆಗೆ, ಮುಂದಿನ ತಿಂಗಳ ೯ರಂದು ಮತದಾನ ನಡೆಯಲಿರುವ ಕರ್ನಾಟಕ, ಗೋವಾ, ನಾಗಾಲ್ಯಾಂಡ್ ಮತ್ತು ತ್ರಿಪುರ ರಾಜ್ಯಗಳಲ್ಲಿನ ಉಪಚುನಾವಣೆಗೂ ಕೂಡ ಇವಿಎಂ-ವಿವಿಪ್ಯಾಟ್‌ಗಳ ಮೊದಲ ರ್‍ಯಾಂಡಮೈಸೇಷನ್ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗಿದೆ ಎಂದು ಆಯೋಗವು ತಿಳಿಸಿದೆ.

<><><><>

ಫ್ರಾನ್ಸ್‌ನಲ್ಲಿ ನಡೆಯುತ್ತಿರುವ ಆರ್ಲಿಯನ್ಸ್ ಮಾಸ್ಟರ್ಸ್ ಬ್ಯಾಡ್ಮಿಂಟನ್ ಟೂರ್ನಿಯ ಮಹಿಳಾ ಸಿಂಗಲ್ಸ್‌ನ ಪ್ರತ್ಯೇಕ ಸೆಮಿಫೈನಲ್ ಪಂದ್ಯಗಳಲ್ಲಿಂದು ಭಾರತದ ತನ್ವಿ ಶರ್ಮಾ ಮತ್ತು ಇಶಾರಾಣಿ ಬರುವಾ ಕಣಕ್ಕಿಳಿಯುತ್ತಿದ್ದಾರೆ. ಇಂದು ನಡೆಯಲಿರುವ ಮೊದಲ ಸೆಮಿಫೈನಲ್ಸ್ ಪಂದ್ಯದಲ್ಲಿ ತನ್ವಿ ಶರ್ಮಾ, ಮಾಜಿ ವಿಶ್ವ ಚಾಂಪಿಯನ್ ಜಪಾನ್‌ನ ನೊಜೊಮಿ ಒಕುಹರಾ ವಿರುದ್ಧ ಸೆಣಸಲಿದ್ದಾರೆ. ಇಂದಿನ ಎರಡನೇ ಸೆಮಿಫೈನಲ್‌ನಲ್ಲಿ ಇಶಾರಾಣಿ ಬರುವಾ, ಥೈಲ್ಯಾಂಡ್‌ನ ಪಿಚ್ಚಾಮೋನ್ ಒಪಾತ್‌ನಿಪುತ್ ವಿರುದ್ಧ ಫೈನಲ್‌ನಲ್ಲಿ ಸ್ಥಾನ ಪಡೆಯಲು ಸೆಣಸಾಟ ನಡೆಸಲಿದ್ದಾರೆ.

<><><><>

ಮುಂಬೈನಲ್ಲಿ ನಡೆಯುತ್ತಿರುವ ಇಂಡಿಯನ್ ಓಪನ್ ಸಶ್ ಟೂರ್ನಿಯಲ್ಲಿ ಭಾರತದ ಅನಾಹತ್ ಸಿಂಗ್, ತನ್ವಿ ಖನ್ನಾ, ಅಭಯ್ ಸಿಂಗ್ ಮತ್ತು ವೀರ್ ಚೋತ್ರಾನಿ ಸೆಮಿಫೈನಲ್ಸ್ ಪ್ರವೇಶಿಸಿದ್ದಾರೆ. ಅಗ್ರ ಶ್ರೇಯಾಂಕಿತ ಅನಾಹತ್ ಮಲೇಷ್ಯಾದ ಸೆಹ್ವೀತ್ರ ಕುಮಾರ್ ವಿರುದ್ಧ ೩-೦ ಅಂತರದ ಗೆಲುವು ಸಾಧಿಸಿದರೆ, ಶ್ರೇಯಾಂಕರಹಿತ ತನ್ವಿ ನಿನ್ನೆಯ ಕ್ವಾರ್ಟರ್-ಫೈನಲ್ ಪಂದ್ಯದಲ್ಲಿ ನಾಲ್ಕನೇ ಶ್ರೇಯಾಂಕಿತ ಮಲೇಷ್ಯಾದ ಐನಾ ಅಮಾನಿ ಅವರನ್ನು ೩-೧ ಅಂತರದಿಂದ ಮಣಿಸಿದರು. ಇಂದಿನ ಸೆಮಿಫೈನಲ್‌ನಲ್ಲಿ ಅನಾಹತ್ ಮತ್ತು ತನ್ವಿ ಮುಖಾಮುಖಿಯಾಗಲಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾ ಮುಕ್ತಾಯವಾಯಿತು <><>